ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಮೀಸಲಿಟ್ಟಿರುವ ಅನುದಾನ ಹಿಂಪಡೆದಿರುವ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

54 (68) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೋವಿಡ್-19ರ ಸಮಸ್ಯೆ ಉದ್ಭವಿಸಿರುವ ಹಿನ್ನಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣಕ್ಕಾಗಿ ಮೀಸಲಿಟ್ಟಿರುವ ಅನುದಾನವನ್ನು ಕಡಿತಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಅನುದಾನ ಕಡಿತಗೊಳಿಸಲಾಗಿದೆ;

(ಆ) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯಲ್ಲಿ ಅನುದಾನಿತ ಶಾಲಾ ಮತ್ತು ಕಾಲೇಜುಗಳಲ್ಲಿ ಸರ್ಕಾರ ನಿಗದಿಪಡಿಸಿರುವ ಹಾಗೂ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದು ಶಿಕ್ಷಣ ಸಂಸ್ಥೆಗಳು ಅಧಿಸೂಚನೆ ಹೊರಡಿಸಿರುವ ಹುದ್ದೆಗಳನ್ನು ಭರ್ತಿ ಮಾಡಿ ಅನುಮೋದನೆಗಾಗಿ ಸಲ್ಲಿಸಿರುವ ಪ್ರಸ್ತಾವನೆ ಮತ್ತು ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಈ ಹಂತದಲ್ಲಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆದರೂ ಸಹ ಕಳೆದ 6 ತಿಂಗಳುಗಳಿಂದ ವೇತನವಿಲ್ಲದೆ ಶಿಕಕ್ಷರು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?